19 ಪ್ರಶ್ನೆಗಳಿಗೆ ಉತ್ತರಗಳನ್ನು ಮತ್ತು ಚುಕ್ಕೆ ಗುರುತಿಲ್ಲದ 18 ಪ್ರಶ್ನೆಗಳ ಉತ್ತರಗಳನ್ನು ಈ ಸಭೆಯ ಮುಂದೆ ಮಂಡಿಸುತ್ತೇನೆ.

23-3-94ರ ಚುಕ್ಕೆ ಗುರುತಿನ ಪ್ರಶ್ನೋತ್ತರಗಳು

ಹೊಳೆನರಸೀಪುರದಲ್ಲಿರುವ ಪದವಿಪೂರ್ವ ಕಾಲೇಜುಗಳು

544 - ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೆನರಸೀಪುರ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಳೆನರಸೀಪುರ ತಾಲ್ಲೂಕಿನಲ್ಲಿರತಕ್ಕ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

ಆ) 1993-94ರಲ್ಲಿ ಆ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವಕಾಲೇಜುಗಳನ್ನು ತೆರೆಯಲಾಗಿದೆ.

ಇ) 1994-95ರಲ್ಲಿ ಹೊಳೆನರಸೀಪುರ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ತೆರೆಯಲಾಗುವುದು.

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ಹೊಳೆನರಸೀಪುರ ತಾಲ್ಲೂಕಿನಲ್ಲಿ ಒಟ್ಟು 5 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇರುತ್ತವೆ.

ಆ) 1993-94ರಲ್ಲಿ ಆ ತಾಲ್ಲೂಕಿನಲ್ಲಿ ಯಾವುದೇ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಿರುವುದಿಲ್ಲ.

ಇ) 1994-95ರಲ್ಲಿ ಹೊಳೆನರಸೀಪುರ ತಾಲ್ಲೂಕಿನಲ್ಲಿ ಯಾವುದೇ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಪ್ರಸ್ತಾವನೆ ಬಂದಿರುವುದಿಲ್ಲ. ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಲಾಗುವುದು.

ಮಾಟೋಳ್ಳಿ ಮತ್ತು ಎಕ್ಕುಂಡಿ ಗ್ರಾಮಗಳಲ್ಲಿ ಮೀನುಗಾರರಿಗೆ ಮನೆಗಳ ನಿರ್ಮಾಣ

516 - ಶ್ರೀ ಶಿವಾನಂದ ಪಟ್ಟಣಶೆಟ್ಟಿ (ಬೈಲಹೊಂಗಲ): ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರು ಹಾಗೂ ಸೌದತ್ತಿ ತಾಲ್ಲೂಕಿನ ಮಾಟೋಳ್ಳಿ ಮತ್ತು ಎಕ್ಕುಂಡಿ ಗ್ರಾಮಗಳಲ್ಲಿ ಮೀನುಗಾರರು ಮನೆಗಳನ್ನು ಕಟ್ಟುವ ಸಲುವಾಗಿ ಸೊಸೈಟಿ ಮುಖಾಂತರ ಸ್ಥಳವನ್ನು ಸರ್ಕಾರಕ್ಕೆ ಒದಗಿಸಿದ ಸಂಗತಿ ನಿಜವೇ?

ಆ) ಹಾಗಿದ್ದಲ್ಲಿ ಆ ಮೀನುಗಾರರಿಗೆ ಮನೆಗಳನ್ನು ಕಟ್ಟಲು ಸರ್ಕಾರದವರು ಯಾವ ಕ್ರಮವನ್ನು ಕೈಗೊಂಡಿರುವರು?

ಇ) ಇನ್ನು ಎಷ್ಟು ದಿವಸಗಳಲ್ಲಿ ಅವರಿಗೆ ಮನೆಗಳನ್ನು ಕಟ್ಟಲು ಕ್ರಮಕೈಗೊಳ್ಳಲಾಗುವುದು?

ಈ) ಸೊಸೈಟಿ ಮುಖಾಂತರ ಎಷ್ಟು ಜನ ಮೀನುಗಾರರ ಸ್ಥಳವನ್ನು ಸರ್ಕಾರಕ್ಕೆ ಮನೆಕಟ್ಟಲು ಕೊಟ್ಟಿರುವರು (ಅವರ ಹೆಸರುಗಳನ್ನು ವಿವರವಾಗಿ ನೀಡುವುದಾಗಬೇಕು)

ಉ) ಸರ್ಕಾರದ ನಿರ್ಲಕ್ಷತನದಿಂದ ಅಲ್ಲಿ ಮನೆಗಳನ್ನು ಕಟ್ಟಲು ವಿಳಂಬವಾಗುತ್ತಿದೆಯೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?